**<u>ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು, ದಿನಾಂಕಃ10.06.2026.</u>**

**<u>ಮುಖ್ಯ ವಿಚಾರಣೆಃ-ವಾದಿ ಪರ ಶ್ರೀ. S.I.K., ವಕೀಲರಿಂದಃ-</u>**

ನಾನು ನನ್ನ ಮೌಖಿಕ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯದಿಂದ ಕೂಡಿದ್ದು ಅದನ್ನು ನನ್ನ ಸೂಚನೆ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದನ್ನು ಓದಿ, ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಈಗ ನೋಡುತ್ತಿರುವ ರಿ.ಸ.ನಂ.11 ನೇದ್ದರ ಸನ್ 2023-24 ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 1 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ರಿ.ಸ.ನಂ.11 ನೇದ್ದರ ಸನ್ 1987-88 ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 2 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ರಿ.ಸ.ನಂ.11 ನೇದ್ದರ ಸನ್ 1992-93 ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 3 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ಎಂ.ಆರ್. 9/1992-93 ಅನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 4 ಎಂದು ಗುರುತಿಸಲಾಯಿತು

ಈಗ ನೋಡುತ್ತಿರುವ ದೃಢೀಕೃತ ಪಾಲುವಿಭಾಗ ಪತ್ರ ದಿಃ28.12.1992 ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ 5 ಎಂದು ಗುರುತಿಸಲಾಯಿತು.

ದಾವೆಯಲ್ಲಿ ಕೇಳಿದಂತೆ ಆದೇಶ ಮಾಡಲು ಕೋರಿಕೊಳ್ಳುತ್ತೇನೆ.

**<u>ಪಾಟೀ ಸವಾಲುಃ</u> ಪ್ರತಿವಾದಿ ಪರ ವಕೀಲರಿಂದಃ-**

(ಈ ಹಂತದಲ್ಲಿ ಪ್ರತಿವಾದಿ ಏಕಪಕ್ಷವಾಗಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು)

**<u>ಮರು ವಿಚಾರಣೆ</u> ಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸರಿ ಇದೆ**

**Sd/-**

**ಸಿವಿಲ್ ನ್ಯಾಯಾಧೀಶರು, ಜಗಳೂರು**